'ಪ್ರಜಾವಾಣಿ' ವರದಿಗೆ ಸ್ಪಂದನೆ: ಮನೆಗೆ ಸೋಲಾರ್ ಉಪಕರಣ ಅಳವಡಿಕೆ

ಮನೆಗೆ ಬಂತು ಸೆಲ್ಕೊ ಬೆಳಕು

ಪ್ರಜಾವಾಣಿ ವಾರ್ತೆ

ಉಡುಪಿ: ಜಾಗದ ದಾಖಲೆಗಳಿಲ್ಲ ಎಂಬ ಕಾರಣಕ್ಕೆ 13 ವರ್ಷಗಳಿಂದ ವಿದ್ಯುತ್ ಸಂಪರ್ಕ ಪಡೆಯಲು ಸಾಧ್ಯವಾಗದೆ ಕತ್ತಲೆಗಲ್ಲಿ ಜೀವನ ಸಾಗಿಸುತ್ತಿದ್ದ ಬ್ರಹ್ಮಾವರ ತಾಲ್ಲೂಕಿನ ಮಂದಾರ್ತಿಯ ಹೆಗ್ಗುಂಜೆ ಗ್ರಾಮದ ಮುರಾರಿ ಮರಾಠೆ ಹಾಗೂ ಪ್ರಭಾವತಿ ನಿವಾಸಕ್ಕೆ ಕೊನೆಗೂ ಬೆಳಕು ಹರಿದಿದೆ.

ಜುಲೈ 31ರಂದು 'ಪ್ರಜಾವಾಣಿ'ಯಲ್ಲಿ ಕತ್ತಲಲ್ಲಿ ಮಂಕಾಗುತ್ತಿದೆ ಮಕ್ಕಳ ಭವಿಷ್ಯ ಎಂಬ ಶೀರ್ಷಿಕೆಯಡಿ ಪ್ರಕಟವಾದ ವಿಶೇಷ ವರದಿ ಗಮನಿಸಿದ ಸೆಲ್ಕೊ ಸೋಲಾರ್ ಲೈಟ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಪ್ರತಿನಿಧಿಗಳು ಈಚೆಗೆ ಮುರಾರಿ ಮರಾಠೆ ನಿವಾಸಕ್ಕೆ ತೆರಳಿ ಸೋಲಾರ್ ಉಪಕರಣಗಳನ್ನು ಅಳವಡಿಸಿದ್ದಾರೆ. ಕತ್ತಲು ತುಂಬಿದ್ದ ಮನೆಯಲ್ಲಿ ಇದೀಗ ಬೆಳಕು ಮೂಡಿದೆ.

ಜಡ್ಡುಗಟ್ಟಿದ ಆಡಳಿತ ವ್ಯವಸ್ಥೆ ಮಾಡಲಾಗದ ಕಾರ್ಯವನ್ನು ಖಾಸಗಿ ಸಂಸ್ಥೆಯೊಂದು ಮುಕುವರ್ಜಿ ಮಾಡಿದ್ದಕ್ಕೆ ದಂಪತಿ ಸೆಲ್ಕೊ ಕಂಪನಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. ವಿದ್ಯುತ್ ಸಂಪರ್ಕವಿಲ್ಲದೆ ಆನ್‌ಲೈನ್ ತರಗತಿಯಲ್ಲಿ ಭಾಗಿಯಾಗಲು ಸಮಸ್ಯೆ ಎದುರಿಸುತ್ತಿದ್ದ ಮಕ್ಕಳ ಮೊಗದಲ್ಲಿ ಮಂದಹಾಸ ಕಾಣುತ್ತಿದೆ.

ಸೆಲ್ಕೊ ಕಂಪನಿಯ ಎಂಎ ಸುರೇಶ್ ನಾಯ್ಕ್ ಮಾತನಾಡಿ, 'ಜಿಲ್ಲೆಯಲ್ಲಿ ವಿದ್ಯುತ್ ಸಂಪರ್ಕ ಇಲ್ಲದ 100ಕ್ಕೂ ಹೆಚ್ಚು ಮನೆಗಳಿಗೆ ಸೆಲ್ಕೊ ಸಂಸ್ಥೆ ಉಚಿತವಾಗಿ ಸೋಲಾರ್ ವ್ಯವಸ್ಥೆ ಮಾಡಿದೆ. ಜತೆಗೆ, ಕರ್ನಾಟಕ ಬ್ಯಾಂಕ್‌ನ ಆರ್ಥಿಕ ನೆರವಿನೊಂದಿಗೆ 200ಕ್ಕೂ ಹೆಚ್ಚು ಮನೆಗಳಿಗೆ ರಿಯಾಯಿತಿ ದರದಲ್ಲಿ ಸೋಲಾರ್ ಉಪಕರಣಗಳನ್ನು ಅಳವಡಿಸಿದೆ. ವಿದ್ಯುತ್ ಸಂಪರ್ಕ ಇಲ್ಲ ಎಂಬ ಕಾರಣಕ್ಕೆ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಬಾರದು ಎಂಬುದು ಸಂಸ್ಥೆಯ ಉದ್ದೇಶ' ಎಂದರು.

ಸೆಲ್ಕೊ ಆರಂಭವಾಗಿ 26 ವರ್ಷಗಳು ಕಳೆದಿವೆ. 2010ರಲ್ಲಿ ಸೆಲ್ಕೊ ಫೌಂಡೇಷನ್ ಕಾರ್ಯಾರಂಭ ಮಾಡಿತು. ಆರಂಭದಲ್ಲಿ ವಿದ್ಯುತ್ ಸಂಪರ್ಕ ಇಲ್ಲದ ಮನೆಗಳಿಗೆ ಸೋಲಾರ್ ಉಪಕರಣಗಳನ್ನು ಉಚಿತವಾಗಿ ಕೊಡಲಾಗುತ್ತಿತ್ತು. ಈಗ ಬಡವರ ಜೀವನಮಟ್ಟ ಸುಧಾರಣೆಗೆ ನೆರವಾಗುವ ಹಾಲು ಕರೆಯುವ ಯಂತ್ರ, ಹೊಲಿಗೆ ಯಂತ್ರಗಳನ್ನು ವಿತರಿಸಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಸೋಲಾರ್ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆ ಮಾಡಲಾಗುತ್ತಿದೆ ಎಂದರು.

ವರದಿ ಫಲಶ್ರುತಿ

ನೆರವಿನ ನಿರೀಕ್ಷೆಯಲ್ಲಿ ಕುಟುಂಬ: ಮುರಾರಿ ಮರಾಠಿ ಹಾಗೂ ಪ್ರಭಾವತಿ ದಂಪತಿ ಸರ್ಕಾರಿ ಜಾಗದಲ್ಲಿ ವಾಸವಾಗಿದ್ದು ಇದುವರೆಗೂ ಹಕ್ಕುಪತ್ರ ಸಿಕ್ಕಿಲ್ಲ. ದಾಖಲೆಗಳಿಲ್ಲ ಎಂಬ ಕಾರಣಕ್ಕೆ ಕುಡಿಯುವ ನೀರಿನ ಸಂಪರ್ಕವೂ ಇಲ್ಲ. ದಂಪತಿಯ ಮೂರು ಮಕ್ಕಳು ಸರ್ಕಾರಿ ಶಾಲೆಯಲ್ಲಿ ಓದುತ್ತಿದ್ದು, ಕಾಯಿ ಪ್ರಭಾವತಿ ಬಳಿ ಇರುವ ಸ್ಮಾರ್ಟ್ ಫೋನ್‌ನಲ್ಲಿ ಮೂವರು ಮಕ್ಕಳು ಆನ್‌ಲೈನ್ ತರಗತಿ ಕಲಿಯಬೇಕಾಗಿದೆ.

ಹೆಗ್ಗುಂಜೆಯ ಮುರಾರಿ ಮರಾಠೆ ಹಾಗೂ ಪ್ರಭಾವತಿ ದಂಪತಿ ಮನೆಗೆ ಸೆಲ್ಕೊ ಸಂಸ್ಥೆಯಿಂದ ಸೋಲಾರ್ ವಿದ್ಯುತ್ ಉಪಕರಣ ಅಳವಡಿಸಲಾಯಿತು.

ಮುಖ್ಯಾಂಶಗಳು

- ಸೆಲ್ಕೊನಿಂದ ವಿದ್ಯುತ್ ಸಂಪರ್ಕ ಇಲ್ಲದ ಮನೆಗಳಿಗೆ ಬೆಳಕು
- ಬಡವರ ಜೀವನೋಪಾಯಕ್ಕೆ ಅಗತ್ಯ ನೆರವು
- ಹಕ್ಕುಪತ್ರ ನೀಡುವಂತೆ ಕುಟುಂಬ ಆಗ್ರಹ

ವಿದ್ಯುತ್ ಸಂಪರ್ಕ ಇಲ್ಲದೆ ಮಕ್ಕಳ ವಿದ್ಯಾಭ್ಯಾಸಕ್ಕೆ ತುಂಬಾ ತೊಂದರೆಯಾಗಿತ್ತು. ಸೋಲಾರ್ ನೆರವು ನೀಡಿದ ಸೆಲ್ಕೊ ಹಾಗೂ ಪ್ರಜಾವಾಣಿಗೆ ಕೃತಜ್ಞತೆ ಸಲ್ಲಿಸುತ್ತೇನೆ.
ಪ್ರಭಾವತಿ, ಸಂಜು

ಕತ್ತಲಲ್ಲಿ ಮಂಕಾಗುತ್ತಿದೆ ಮಕ್ಕಳ ಭವಿಷ್ಯ

ವಿದ್ಯುತ್ ಸಂಪರ್ಕ ಇಲ್ಲದೆ ಚಿಮಣಿ ದೀಪದಲ್ಲಿ ಮಕ್ಕಳು ಓದುತ್ತಿರುವ ಬಗ್ಗೆ ಜುಲೈ 31ರಂದು ಪ್ರಕಟವಾದ ವರದಿ.

'ಪ್ರಾಣಕ್ಕೆ ಕುತ್ತು ತಂದಿದ್ದ ಚಿಮಣಿ ದೀಪ'

ಮಕ್ಕಳು ಚಿಮಣಿ ದೀಪದ ಬೆಳಕಿನಲ್ಲಿ ಓದುವಾಗ ಎಚ್ಚರತಪ್ಪಿ ಮೈಗೆ ಬೆಂಕಿ ತಾಗಿಸಿಕೊಂಡು ಪ್ರಾಣಕ್ಕೆ ಸಂಚಕಾರ ತಂದುಕೊಂಡಿರುವ ಘಟನೆಗಳು ಹಿಂದೆ ಜಿಲ್ಲೆಯಲ್ಲಿ ನಡೆದಿವೆ. ಇಂತಹ ಘಟನೆಗಳು ಮರುಕಳಿಸಬಾರದು ಎಂಬ ಕಾರಣಕ್ಕೆ ಸೆಲ್ಕೊ ಸಂಸ್ಥೆಯು ವಿದ್ಯುತ್ ಸಂಪರ್ಕ ಇಲ್ಲದ ಬಡವರ ಮನೆಗಳಿಗೆ ಸೋಲಾರ್ ಬೆಳಕು ನೀಡುವ ಕಾರ್ಯದಲ್ಲಿ ತೊಡಗಿಸಿಕೊಂಡಿದೆ ಎಂದರು ಸುರೇಶ್ ನಾಯ್ಕ್.